## ಅಧ್ಯಕ್ಷರು, ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಗಳು, ಉಡುಪಿ ಜಿಲ್ಲೆ, ಉಡುಪಿ ಇವರ ನಡವಳಿ

ದಿನಾಂಕ: 4.2.2013

ಕ್ರಮಸಂಖ್ಯೆ: ವಿಎಎಸ್ ಸಿಆರ್ 20/2012-13

ವಿಷಯ: ಉಡುಪಿ ಜಿಲ್ಲಾ ಗ್ರಾಮಲೆಕ್ಕಿಗರ ನೇರ ನೇಮಕಾತಿ- ಪ್ರಾವಿಜನಲ್ ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸುವ ಕುರಿತು.

ಉಲ್ಲೇಖ:1. ಸರ್ಕಾರದ ಅಧಿಸೂಚನೆ ಸಂಖ್ಯೆ: ಕಂಇ 04 ಬಿಎಸ್ ಸಿ 2011 ದಿನಾಂಕ: 25.2.2011

2. ಈ ಕಛೇರಿಯ ಅಧಿಸೂಚನೆ ಸಮಸಂಖ್ಯೆ ದಿನಾಂಕ: 10.12.2012

******

ಕರ್ನಾಟಕ ಸರ್ಕಾರದ ಕಂದಾಯ ಇಲಾಖೆಯ ಉಡುಪಿ ಜಿಲ್ಲಾ ಘಟಕದಲ್ಲಿ ತೆರವಾಗಿರುವ ಗ್ರಾಮಲೆಕ್ಕಿಗರ ಹುದ್ದೆಗಳನ್ನು ಕರ್ನಾಟಕ ಸಾಮಾನ್ಯ ಸೇವೆಗಳು (ರೆವೆನ್ಯೂ ಸಬೋರ್ಡಿನೇಟ್ ಬ್ರಾಂಚ್) ಕೇಡರ್ ಎಂಡ್ ರಿಕ್ರೂಟ್ ಮೆಂಟ್ (ತಿದ್ದುಪಡಿ) ನಿಯಮಗಳು 2008 ಮತ್ತು 2009 ರನ್ವಯ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರದ ಪತ್ರ ಸಂಖ್ಯೆ ಕಂಇ 04 ಬಿಎಸ್ ಸಿ 2011 ರಲ್ಲಿ ಅನುಮೋದನೆ ನೀಡಿರುವಂತೆ ಉಲ್ಲೇಖ 2 ರ ಈ ಕಛೇರಿಯ ಅಧಿಸೂಚನೆಯಲ್ಲಿ 24 ಗ್ರಾಮಲೆಕ್ಕಿಗರ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ Online ಮುಖಾಂತರ ಅರ್ಜಿಯನ್ನು ಆಹ್ವಾನಿಸಲಾಗಿ 1:5 ರ ಅನುಪಾತದಲ್ಲಿ ಅಭ್ಯರ್ಥಿಗಳ ಮೂಲ ದಾಖಲೆಗಳ ಪರಿಶೀಲನಾ ಪಟ್ಟಿಯನ್ನು ತಯಾರಿಸಿ ದಿನಾಂಕ: 29.1.2013 ರಂದು ಮೂಲ ದಾಖಲೆಗಳ ಪರಿಶೀಲನೆ ನಡೆಸಲಾಯಿತು. ಮೂಲ ದಾಖಲೆಗಳ ಪರಿಶೀಲನೆಗೆ ಹಾಜರಾಗದ ಮತ್ತು ಅನರ್ಹರಾದ ಅಭ್ಯರ್ಥಿಗಳನ್ನು ಕೈ ಬಿಟ್ಟು ಪ್ರಾವಿಜನಲ್ ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿದೆ. ಅಂತಿಮ ಆಯ್ಕೆ ಪಟ್ಟಿಯ ಬಗ್ಗೆ ಏನಾದರೂ ಆಕ್ಷೇಪಗಳಿದ್ದಲ್ಲಿ 7 (ಏಳು) ದಿನಗಳಲ್ಲಿ ಆಕ್ಷೇಪಗಳನ್ನು ಸಮರ್ಥಿಸುವ ದಾಖಲೆಗಳೊಂದಿಗೆ ಲಿಖಿತವಾಗಿ ಈ ಕಛೇರಿಗೆ ಸಲ್ಲಿಸುವಂತೆ ತಿಳಿಸಿದೆ. ನಿಗದಿತ ಅವಧಿಯ ನಂತರ ಸ್ವೀಕೃತವಾದ ಆಕ್ಷೇಪಗಳನ್ನು ಪರಿಗಣಿಸಲಾಗುವುದಿಲ್ಲ.

ಅಧ್ಯಕ್ಷರು,

ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ ಹಾಗೂ

ಜಿಲ್ಲಾಧಿಕಾರಿಗಳು, ಉಡುಪಿ ಜಿಲ್ಲೆ, ಉಡುಪಿ